RNU AIR DHARWAD

# MARCH 17, 2024

## ALL INDIA RADIO- DHARWAD

## PRADESH SAMACHARA (KANNADA) 7:05 AM

<><><>

**ಆಕಾಶವಾಣಿ–ಪ್ರದೇಶ ಸಮಾಚಾರ**

<><><>

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು**

<><><>

- **18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ; 7 ಹಂತಗಳಲ್ಲಿ ಮತದಾನ – ಜೂನ್ 4 ರಂದು ಮತ ಎಣಿಕೆ.**
- **ಏಪ್ರಿಲ್ 26 ಮತ್ತು ಮೇ 7; 2 ಹಂತಗಳಲ್ಲಿ ರಾಜ್ಯದಲ್ಲಿ ಮತದಾನ ನಿಗದಿ.**
- **ಲೋಕಸಭಾ ಸಾರ್ವತ್ರಿಕ ಚುನಾವಣೆ ವೇಳಾಪಟ್ಟಿ; ರಾಜಕೀಯ ಪಕ್ಷಗಳಿಂದ ಸ್ವಾಗತ.**
- **ರಾಷ್ಟ್ರೀಯ ಲೋಕ ಅದಾಲತ್, ರಾಜ್ಯಾದ್ಯಂತ ಯಶಸ್ವಿ.**

<><><>

**ಈಗ ವಾರ್ತೆಗಳ ವಿವರ**

<><><>

**18ನೇ ಲೋಕಸಭಾ ಚುನಾವಣೆಗೆ ವೇಳಾಪಟ್ಟಿ ಪ್ರಕಟವಾಗಿದ್ದು, 7 ಹಂತಗಳಲ್ಲಿ ಮತದಾನ ನಡೆಯಲಿದೆ. ಏಪ್ರಿಲ್ 19 ರಂದು ಮೊದಲ ಹಂತದ ಚುನಾವಣೆ ಆರಂಭವಾಗಲಿದೆ. ಜೂನ್ 1ಕ್ಕೆ ಅಂತಿಮ ಹಂತದ ಮತದಾನ ಮುಗಿಯಲಿದೆ. ಮತ ಎಣಿಕೆ ಜೂನ್ 4 ರಂದು ನಡೆಯಲಿದೆ. ರಾಜ್ಯಾದ್ಯಂತ ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಏಪ್ರಿಲ್ 26ರಂದು ಮೊದಲ ಹಂತದ ಮತದಾನ ಹಾಗೂ ಮೇ 7ಕ್ಕೆ ಎರಡನೇ ಹಂತದ ಮತದಾನ ನಿಗದಿಯಾಗಿದೆ. ಮಾದರಿ ನೀತಿ ಸಂಹಿತೆ ತಕ್ಷಣದಿಂದಲೇ ಜಾರಿಗೆ ಬಂದಿದೆ. ದಿಲ್ಲಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಸುದ್ದಿಗೋಷ್ಠಿಯಲ್ಲಿ ವಿವರ ನೀಡಿದರು. ಎರಡನೇ ಹಂತದ ಮತದಾನ ಏಪ್ರಿಲ್ 26 ರಂದು, ಮೂರನೇ ಹಂತದ ಮತದಾನ ಮೇ 7 ರಂದು, ನಾಲ್ಕನೇ ಹಂತದ ಮತದಾನ ಮೇ 13ರಂದು, ಐದನೇ ಹಂತದ ಮತದಾನ ಮೇ 20 ರಂದು, ಆರನೇ ಹಂತದ ಮತದಾನ ಮೇ 25 ರಂದು ನಡೆಯಲಿದೆ ಎಂದರು. ಲೋಕಸಭಾ ಚುನಾವಣೆಗೆ 97 ಕೋಟಿ ಮತದಾರರು ಹೆಸರು ನೊಂದಾಯಿಸಿದ್ದು, 12 ರಾಜ್ಯಗಳಲ್ಲಿ ಪುರು ' ಮತದಾರರಿಗಿಂತ ಮಹಿಳಾ ಮತದಾರರು ಹೆಚ್ಚಿದ್ದಾರೆ. 1 ಕೋಟಿ 80 ಲಕ್ಷ ಯುವ ಮತದಾರರು ಮೊದಲ ಬಾರಿಗೆ ಮತ ಚಲಾಯಿಸಲಿದ್ದಾರೆ ಎಂದರು. ಚುನಾವಣಾ ಆಯುಕ್ತರಾದ ಡಾಕ್ಟರ್ ಎಸ್.ಎಸ್. ಸಂಧು ಹಾಗೂ ಗ್ಯಾನೇಶ್‌ಕುಮಾರ್ ಪಾಲ್ಗೊಂಡಿದ್ದರು.**

<><><>

ಲೋಕಸಭಾ ಚುನಾವಣೆಗೆ, ಭಾರತ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದ್ದು, ಕರ್ನಾಟಕದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ ಎಂದು, ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜಕುಮಾರ ಮೀನಾ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಟಿ ನಡೆಸಿದ ಅವರು, ಏಪ್ರಿಲ್ 26 ಮತ್ತು ಮೇ 7ರಂದು ಮತದಾನ ನಿಗದಿಯಾಗಿದೆ. ಎಲ್ಲ ಲೋಕಸಭಾ ಕ್ಷೇತ್ರಗಳ ಮತ ಎಣಿಕೆ ಜೂನ್ 4ರಂದು ನಿಗದಿಯಾಗಿದೆ ಎಂದರು.

<><><>

ಮೊದಲ ಹಂತದಲ್ಲಿ ಏಪ್ರಿಲ್ 26 ರಂದು ದಕ್ಷಿಣ ಕರ್ನಾಟಕ ಭಾಗದ 14 ಲೋಕಸಭಾ ಕ್ಷೇತ್ರಗಳಾದ ಉಡುಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಮತ್ತು ಕೋಲಾರದಲ್ಲಿ ಮತದಾನ ನಿಗದಿಯಾಗಿದೆ.

<><><>

ಎರಡನೇ ಹಂತದಲ್ಲಿ ಮೇ 7ರಂದು, ಉಳಿದ 14 ಕ್ಷೇತ್ರಗಳಾದ, ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗದಲ್ಲಿ ಮತದಾನ ನಡೆಯಲಿದೆ ಎಂದರು.

<><><>

ರಾಜ್ಯದಲ್ಲಿ ಈ ಬಾರಿ, 2 ಕೋಟಿ 71 ಲಕ್ಷ ಪುರುಷರು, 2 ಕೋಟಿ 70 ಲಕ್ಷ ಮಹಿಳಾ, ಹಾಗೂ 4 ಸಾವಿರದ 933 ತೃತೀಯ ಲಿಂಗಿ ಮತದಾರರು ಸೇರಿದಂತೆ, ಒಟ್ಟು 5 ಕೋಟಿ 42 ಲಕ್ಷ 8 ಸಾವಿರದ 88 ಮತದಾರರು ಮತ ಚಲಾವಣೆಯ ಹಕ್ಕು ಪಡೆದಿದ್ದಾರೆ. 46 ಸಾವಿರದ 412 ಸೇವಾ ಮತದಾರರಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜಕುಮಾರ ಮೀನಾ ಮಾಹಿತಿ ನೀಡಿದ್ದಾರೆ. 85 ವರ್ಷ ಮೀರಿದ 5 ಲಕ್ಷ 70 ಸಾವಿರ ಮತದಾರರಿದ್ದು, ಇದೇ ಮೊದಲ ಬಾರಿ ಮತದಾನದ ಹಕ್ಕು ಪಡೆದಿರುವ 11 ಲಕ್ಷದ 24 ಸಾವಿರ ಯುವ ಮತದಾರರು, 6 ಲಕ್ಷದ 12 ಸಾವಿರ ವಿಶೇಷಚೇತನ ಮತದಾರರು ಇದ್ದಾರೆ, ಎಂದರು. ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ ಅತೀ ಹೆಚ್ಚು, 31 ಲಕ್ಷದ 74 ಸಾವಿರ ಮತದಾರರಿದ್ದು, ಉಡುಪಿ–ಚಿಕ್ಕಮಗಳೂರು ಕ್ಷೇತ್ರದಲ್ಲಿ ಅತಿ ಕಡಿಮೆ 15 ಲಕ್ಷ 72 ಸಾವಿರ ಮತದಾರರಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><><>

ಶಾಸಕರಾಗಿದ್ದ ರಾಜಾ ವೆಂಕಟಪ್ಪ ನಾಯಕ ಅವರ ನಿಧನದಿಂದ ತೆರವಾದ, ಸುರಪುರ ಮೀಸಲು ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಸಹ, ಮೇ 7ರಂದು ನಡೆಯಲಿದೆ ಎಂದು ಅವರು ಹೇಳಿದ್ದಾರೆ.

<><><>

ಕಾಂಗ್ರೆಸ್ ಲೋಕಸಭಾ ಅಭ್ಯರ್ಥಿಗಳ ಪಟ್ಟಿ ಇನ್ನೆರಡು ದಿನಗಳಲ್ಲಿ ಬಿಡುಗಡೆಯಾಗಲಿದ್ದು, 20ಕ್ಕೂ ಅಧಿಕ ಕ್ಷೇತ್ರಗಳಲ್ಲಿ, ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಗೃಹ ಖಾತೆ ಸಚಿವ ಡಾಕ್ಟರ್ ಜಿ.ಪರಮೇಶ್ವರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ತುಮಕೂರಿನಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

<><><>

ಧಾರವಾಡ ಲೋಕಸಭಾ ಕ್ಷೇತ್ರದ ಚುನಾವಣೆಗೆ, ಏಪ್ರಿಲ್ 12 ರಂದು ಅಧಿಸೂಚನೆ ಹೊರಡಿಸಲಾಗುವುದು ಎಂದು, ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

<><><>

ಜಿಲ್ಲಾಧಿಕಾರಿ ದಿವ್ಯಪ್ರಭು ಧ್ವನಿ 60 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಲೋಕಸಭಾ ಚುನಾವಣೆಗೆ ವೇಳಾಪಟ್ಟಿ ಘೋಷಿಸಿದ್ದನ್ನು ವಿವಿಧ ರಾಜಕೀಯ ಪಕ್ಷಗಳು ಸ್ವಾಗತಿಸಿವೆ. ಬಿಜೆಪಿ ನೇತೃತ್ವದ ಎನ್.ಡಿ.ಎ. ಮೈತ್ರಿಕೂಟ, ಚುನಾವಣೆಗೆ ಸಂಪೂರ್ಣ ಸಿದ್ಧವಾಗಿದೆ ಎಂದು, ಬಿಜೆಪಿ ಹಿರಿಯ ಮುಖಂಡ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಉತ್ತಮ ಆಡಳಿತ ಮತ್ತು ಎಲ್ಲ ವಲಯಗಳಲ್ಲಿ ಒದಗಿಸಿದ ಸೇವೆ ಆಧಾರದ ಮೇಲೆ, ಬಿಜೆಪಿ ಜನರ ಮುಂದೆ ಹೋಗಲಿದೆ ಎಂದು ಜಾಲತಾಣ ಎಕ್ಸ್‌ನಲ್ಲಿ ಪ್ರಕಟಿಸಿದ್ದಾರೆ.

<><><>

ಲೋಕಸಭಾ ಚುನಾವಣೆಗಳು ಭಾರತಕ್ಕೆ ನ್ಯಾಯದ ಬಾಗಿಲು ತೆರೆಯಲಿವೆ. ಪ್ರಜಾಪ್ರಭುತ್ವ ಉಳಿಸಲು ಬಹುಶಃ ಈ ಚುನಾವಣೆ ಕೊನೆಯ ಅವಕಾಶವಾಗಲಿದೆ ಎಂದು ಏ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

<><><>

ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ಆಯೋಜಿಸಲಾಗಿದ್ದ, ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ, 200 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ. ಹಿರಿಯ ನ್ಯಾಯಮೂರ್ತಿ ಎಂ.ಐ.ಅರುಣ್ ಮಾರ್ಗದರ್ಶನದಲ್ಲಿ, ನ್ಯಾಯಮೂರ್ತಿಗಳಾದ ಇ.ಎಸ್.ಇಂದಿರೇಶ ಮತ್ತು ಅನೀಲ್ ಕಟ್ಟಿ ಅವರನ್ನು ಒಳಗೊಂಡ, ಎರಡು ಪೀಠಗಳು, 583 ಪ್ರಕರಣಗಳ ವಿಚಾರಣೆ ನಡೆಸಿ, 4 ಕೋಟಿ 17 ಲಕ್ಷ ರೂಪಾಯಿ ಪಾವತಿಸಿಕೊಂಡಿವೆ.

<><><>

ಕಲಬುರಗಿ ಉಚ್ಚ ನ್ಯಾಯಾಲಯದಲ್ಲಿ ಆಯೋಜಿಸಿದ್ದ, ರಾಷ್ಟ್ರೀಯ ಲೋಕ ಅದಾಲತ್ ನಲ್ಲಿ, ಒಟ್ಟು 277 ಪ್ರಕರಣಗಳನ್ನು ವಿಲೇವಾರಿ ಮಾಡಿ, 7 ಕೋಟಿ, 95 ಲಕ್ಷ ರೂಪಾಯಿ ಪರಿಹಾರ ಮೊತ್ತವನ್ನು ಮಂಜೂರು ಮಾಡಲಾಗಿದೆ. ನ್ಯಾಯಮೂರ್ತಿಗಳಾದ ಜಿ.ಬಸವರಾಜ, ಸಿ.ಎಮ್.ಜೋಶಿ ಹಾಗೂ ಕೆ.ವಿ.ಅರವಿಂದ ಅವರು ಪಾಲ್ಗೊಂಡಿದ್ದರು.

<><><>

ಚಿಕ್ಕಮಗಳೂರಿನಲ್ಲಿ, ಇದೇ 27 ರಿಂದ ಏಪ್ರಿಲ್ 7ರ ವರೆಗೆ, ಒಂದು ವಾರ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಚಿತ್ರ ನಟ ಪ್ರಕಾಶ್ ರೈ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿಕ್ಕಮಗಳೂರು ನೇಹದ ನೇಯ್ಗೆ ಕಾರ್ಯಕ್ರಮದಡಿ, ಕುವೆಂಪು ಕಲಾ ಮಂದಿರದಲ್ಲಿ ರಂಗೋತ್ಸವ ನಿಮಿತ್ತ, ನಾಟಕೋತ್ಸವ, ಸಂವಾದ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಯೋಜಿಸಲಾಗಿದೆ ಎಂದರು.

<><><>

ಕನ್ನಡ ಪತ್ರಿಕೋದ್ಯಮದ ಹಿರಿಯ ಚೇತನ, ಸಾಹಿತಿ, ನಾಡೋಜ ಪಾಟೀಲ ಪುಟ್ಟಪ್ಪ ಅವರ ಪುಣ್ಯ ಸ್ಮರಣೆ ಹಿನ್ನೆಲೆ, ನಮನಗಳನ್ನು ಸಲ್ಲಿಸುತ್ತಿರುವುದಾಗಿ, ಸಚಿವರಾದ ಎನ್.ಚಲುವರಾಯಸ್ವಾಮಿ ಹಾಗೂ ಎಂ.ಬಿ. ಪಾಟೀಲ ಸಾಮಾಜಿಕ

ಜಾಲತಾಣ ಎಕ್ಸ್ ಮೂಲಕ ತಿಳಿಸಿದ್ದಾರೆ. ಕರ್ನಾಟಕ ಏಕೀಕರಣಕ್ಕಾಗಿ ಅವರು ನಡೆಸಿದ ಹೋರಾಟ ಹಾಗೂ ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆ ಸ್ಮರಣೀಯ ಎಂದು ಅವರು ಸ್ಮರಿಸಿದ್ದಾರೆ.

<><><>

ಮಾಜಿ ಶಿಕ್ಷಣ ಖಾತೆ ಸಚಿವೆ ಡಾಕ್ಟರ್ ನಾಗಮ್ಮ ಕೇಶವಮೂರ್ತಿ ದಾವಣಗೆರೆಯಲ್ಲಿ ನಿಧನರಾಗಿದ್ದಾರೆ. ಅವರಿಗೆ 90 ವರ್ಷ ವಯಸ್ಸಾಗಿತ್ತು. ದಾವಣಗೆರೆಯಲ್ಲಿ ವನಿತಾ ಸಮಾಜ ಸ್ಥಾಪಿಸಿ, ಮಹತ್ತರ ಸೇವೆಗೈದ ಹಿನ್ನೆಲೆ, ಅವರಿಗೆ ಕೇಂದ್ರ ಸರ್ಕಾರ, ಮಹಿಳಾ ಸಾಧಕಿ ಪ್ರಶಸ್ತಿ ನೀಡಿ ಗೌರವಿಸಿತ್ತು. ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಅವರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿತ್ತು. ಮುಖ್ಯಮಂತ್ರಿ ಸೇರಿದಂತೆ, ಅನೇಕ ಗಣ್ಯರು ಸಂತಾಪ ವ್ಯಕ್ತ ಪಡಿಸಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ದಿಲ್ಲಿಯಲ್ಲಿ ಇಂದು, ಮಹಿಳೆಯರ ಪ್ರೀಮಿಯರ್ ಲೀಗ್ ಟಿ–20 ಕ್ರಿಕೆಟ್ ಟೂರ್ನಿಯ ಅಂತಿಮ ಪಂದ್ಯ ನಡೆಯಲಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ. ಪಂದ್ಯ ರಾತ್ರಿ 7.30ಕ್ಕೆ ಆರಂಭವಾಗಲಿದೆ.

<><><>

ಪ್ರಸಾರ ಭಾರತಿಯ ನೂತನ ಅಧ್ಯಕ್ಷರಾಗಿ, ಸೇವಾ ನಿವೃತ್ತ ಹಿರಿಯ ಐ.ಎ.ಎಸ್. ಅಧಿಕಾರಿ ನವನೀತ್ ಕುಮಾರ್ ಸೆಹಗಲ್, ಅಧಿಕಾರ ವಹಿಸಿಕೊಂಡಿದ್ದಾರೆ.

<><><>

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಡಿಯ, ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ ಪ್ರಸಕ್ತ ಸಾಲಿನಲ್ಲಿ, 6ನೇ ವರ್ಗಕ್ಕೆ ಪ್ರವೇಶ ಪಡೆಯಲು, ಆನ್ಲೈನ್ ಅರ್ಜಿ ಆಹ್ವಾನಿಸಲಾಗಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- 18ನೇ ಲೋಕಸಭೆ ಸಾರ್ವತ್ರಿಕ ಚುನಾವಣೆ: 7 ಹಂತಗಳಲ್ಲಿ ಮತದಾನ – ಜೂನ್ 4 ರಂದು ಮತ ಎಣಿಕೆ.
- ಏಪ್ರಿಲ್ 26 ಮತ್ತು ಮೇ 7: 2 ಹಂತಗಳಲ್ಲಿ ರಾಜ್ಯದಲ್ಲಿ ಮತದಾನ ನಿಗದಿ.
- ಲೋಕಸಭಾ ಸಾರ್ವತ್ರಿಕ ಚುನಾವಣೆ: ರಾಜ್ಯದ 31 ಜಿಲ್ಲಾಡಳಿತಗಳಿಂದ ಭರದ ಸಿದ್ಧತೆ.
- ರಾಷ್ಟ್ರೀಯ ಲೋಕ ಅದಾಲತ್, ರಾಜ್ಯಾದ್ಯಂತ ಯಶಸ್ವಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>